ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಭಾಧ್ಯಕ್ಷರು -(ವಿ.ಸ.ಸ)

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 26/6/2020

# ಸಭಾಧ್ಯಕ್ಷರ ಪೀಠದ ಘನತೆಗೆ ಧಕ್ಕೆ ಆರೋಪ

26/6/20

ಸಂ.ಕ.ಸಮಾಚಾರ ಬೆಂಗಳೂರು

ಸಾರ್ವಜನಿಕ ಲೆಕ್ಕಪತ್ರ ಸಮಿತಿ ಅಧ್ಯಕ್ಷ ಎಚ್.ಕೆ.ಪಾಟೀಲ್ ಮಾಧ್ಯಮಗಳಿಗೆ ಬಹಿರಂಗ ಹೇಳಿಕೆ ನೀಡುವ ಮೂಲಕ ಹಾಗೂ ಅವರ ಕಾರ್ಯ ವೈಖರಿಯಿಂದ ಸಭಾಧ್ಯಕ್ಷರ ಪೀಠದ ಗೌರವಕ್ಕೆ ಧಕ್ಕೆ ತಂದಿದ್ದಾರೆಂದು ದೂರಿ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ವಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.



ಕೊರೊನಾ ಹಾವಳಿ ಹಿನ್ನೆಲೆಯಲ್ಲಿ ಖರೀದಿಸಲಾಗಿದ್ದ ಪಿಪಿಇ ಕಿಟ್, ಸ್ಯಾನಿಟೈಸರ್ ಮೊದಲಾದ ವೈದ್ಯಕೀಯ ಉತ್ಪನ್ನಗಳ ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂದು ಕರ್ನಾಟಕ ರಾಷ್ಟ್ರ ಸಮಿತಿಯು ಸಾರ್ವಜನಿಕ ಲೆಕ್ಕಪತ್ರ ಸಮಿತಿಗೆ ದೂರು ನೀಡಿತ್ತು. ದೂರು ಆಧರಿಸಿ ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ತನಿಖೆ ನಡೆಸಲು ಸಜ್ಜಾಗಿತ್ತು. ಆದರೆ, ಈ ಸಂದರ್ಭದಲ್ಲಿ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಡೆಯೊಡ್ಡಿದ್ದರು.

ಈ ಸಂಗತಿಯು ಹಾಗೆಯೇ ತದನಂತರವೂ ನಡೆದ ಸಭೆಗಳಲ್ಲಿನ ಮಾಹಿತಿಯು ಮಾಧ್ಯಮಗಳಲ್ಲಿ ಪ್ರಚಾರವಾಗಿ ಸಾರ್ವಜನಿಕವಾಗಿ ಚರ್ಚೆಗೆ ಗ್ರಾಸವಾಗಿತ್ತು. ಜೊತೆಗೆ ಕಾಗೇರಿ ಅವರ ಹಸ್ತಕ್ಷೇಪದಿಂದ ಮುಕ್ತವಾಗಿ ತನಿಖೆ ನಡೆಸಲು ಆಗುತ್ತಿಲ್ಲ ಎಂದು ದೂರಿದ್ದ ಎಚ್‌ಕೆ ಪಾಟೀಲ್ ಕಾಗೇರಿ ಅವರ ವಿರುದ್ಧ ಹಕ್ಕುಚ್ಯುತಿ ಮಂಡಿಸುವುದಾಗಿಯೂ ಹೇಳಿದ್ದರು.

ಇದಕ್ಕೆ ಪ್ರತಿಯಾಗಿ ತದನಂತರದ ಲೆಕ್ಕಪತ್ರ ಸಮಿತಿ ಸಮಿತಿಯಲ್ಲಿ ಬಿಜೆಪಿ ಶಾಸಕರು ಏರಿದ ದನಿಯಲ್ಲಿ ಮಾತನಾಡಿ ಸಭಾಧ್ಯಕ್ಷರ ನಡೆ ಸಮರ್ಥಿಸಿಕೊಂಡಿದ್ದರು.

ಇದೇ ಹಿನ್ನೆಲೆಯಲ್ಲಿ ಅವ್ಯವಹಾರದ ವಿಷಯವಾಗಿ ಚರ್ಚಿಸಲು ಅವಕಾಶ ನೀಡುವಂತೆ ಸಮಿತಿ ಅಧ್ಯಕ್ಷ ಎಚ್.ಕೆ ಪಾಟೀಲ್ ಅವರು ಕಾಗೇರಿಯವರಿಗೆ ಪತ್ರ ಬರೆದಿದ್ದರು. ಈ ಎಲ್ಲಾ ಹಿನ್ನೆಲೆಯಲ್ಲಿ ಪತ್ರ ಬರೆದಿರುವ ಕಾಗೇರಿ ಅವರು, ಸಮಿತಿಯ ಕಾರ್ಯವೈಖರಿಯಿಂದಾಗಿ ಈ ಸಂಗತಿಯು ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಯ ವಿಷಯವಾಗಿ ಮಾರ್ಪಟ್ಟಿದೆ. ಇದು ಸರಿಯಾದುದ್ದಲ್ಲ, ಸಭಾಧ್ಯಕ್ಷರ ಪೀಠದ ಘನತೆಯ ಬಗ್ಗೆ ಅರಿತುಕೊಂಡು ಮುಂದಡಿ ಇಡಬೇಕಾಗುತ್ತದೆ. ಅನಗತ್ಯವಾಗಿ ಸಭಾಧ್ಯಕ್ಷರ ಪೀಠವನ್ನು ವಿವಾದಕ್ಕೆ ತಳಕುಹಾಕುವ ಪ್ರಯತ್ನ ಸಲ್ಲದು ಎಂದು ಪತ್ರದಲ್ಲಿ ಗಮನ ಸೆಳೆದಿದ್ದಾರೆ.